ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್‌ಗಳ ಅನುದಾನದ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ(ಪದವೀಧರರ ಕ್ಷೇತ್ರ):-

493 (774) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ (DMFD) ಗಳು ಅಸ್ತಿತ್ವದಲ್ಲಿ ಇವೆಯೇ; ಹಾಗಿದ್ದಲ್ಲಿ, ಅವು ಯಾವುವು; ಇದರ ಸ್ಥಾಪನೆಯ ಉದ್ದೇಶಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಟ್ರಸ್ಟ್‌ಗಳ ಅಡಿ ಹಾಲಿ ಲಭ್ಯವಿರುವ ಅನುದಾನವೆಷ್ಟು; ಸದರಿ ಅನುದಾನವನ್ನು ಯಾವ ಮೂಲದಿಂದ ಶೇಖರಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಅನುದಾನವನ್ನು ಯಾವ ಯಾವ ಕಾರ್ಯಗಳಿಗೆ ವಿನಿಯೋಗಿಸಲಾಗುವುದು; ಹಾಲಿ ಇರುವ ಮಾರ್ಗ ಸೂಚಿಗಳೇನು; ಇಲ್ಲಿಯವರೆಗೆ ಖರ್ಚಾಗದೆ ಉಳಿದಿರುವ ಅನದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಸದರಿ ಅನುದಾನದಡಿಯ ಕಾಮಗಾರಿಗಳು ಯಾವುವು? (ವಿವರವಾದ ಮಾಹಿತಿ ನೀಡುವುದು)